| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1643 (1816) |
| ಮಾನ್ಯ ಸದಸ್ಯರ ಹೆಸರು | ಡಾ: ಉಮಾಶ್ರೀ (ನಾಮ ನಿರ್ದೇಶಿತರು) |
| ಉತ್ತರಿಸಬೇಕಾದ ದಿನಾಂಕ | 23.03.2026 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಸೌರವಿದ್ಯುತ್ ಘಟಕಗಳನ್ನು ಅಳವಡಿಸಲು ಸರ್ಕಾರ ಚಿಂತಿಸಿದಯೇ; ಚಿಂತಿಸಿದ್ದಲ್ಲಿ, ಇದುವರೆಗೂ ಎಷ್ಟು ಸರ್ಕಾರಿ ಆಸ್ಪತ್ರೆಗಳಲ್ಲಿ ಅಳವಡಿಸಲಾಗಿದೆ; ಈ ಕುರಿತು ಮಾಹಿತಿ ನೀಡುವುದು; ಉಳಿದ ಆಸ್ಪತ್ರೆಗಳಲ್ಲಿ ಯಾವಾಗ ಅಳವಡಿಸಲಾಗುವುದು | ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಸೌರ ವಿದ್ಯುತ್ ಘಟಕಗಳನ್ನು ಅಳವಡಿಸಲು ಕರ್ನಾಟಕ ಸೌರ ಸ್ವಾಸ್ಥ್ಯ ಯೋಜನೆ ಜಾರಿಗೊಳಿಸಲಾಗಿದೆ.<br><br>ಈ ಯೋಜನೆಯಡಿ ರಾಜ್ಯದ ಒಟ್ಟು 5000 ಸರ್ಕಾರಿ ಆಸ್ಪತ್ರೆಗಳಿಗೆ ಸೌರವಿದ್ಯುತ್ ಘಟಕಗಳನ್ನು ಅಳವಡಿಸಲು ಒಡಂಬಡಿಕೆ (MoU) ಮಾಡಿಕೊಂಡಿದೆ. ಈಗಾಗಲೇ ಒಟ್ಟು 3660 ಸರ್ಕಾರಿ ಆಸ್ಪತ್ರೆಗಳಿಗೆ ಸೌರವಿದ್ಯುತ್ ಘಟಕಗಳನ್ನು ಅಳವಡಿಸಲಾಗಿರುತ್ತದೆ.<br><br>ಇನ್ನುಳಿದ 1340 ಸರ್ಕಾರಿ ಆಸ್ಪತ್ರೆಗಳಿಗೆ ಸೌರವಿದ್ಯುತ್ ಘಟಕಗಳನ್ನು ಅಳವಡಿಸಲು ಡಿಸೆಂಬರ್ 2026 ರ ಒಳಗಾಗಿ ಕ್ರಮ ಕೈಗೊಳ್ಳಲಾಗುತ್ತದೆ. |
| (ಆ) | ಈ ಯೋಜನೆಗೆ ಸರ್ಕಾರವು ಎಷ್ಟು ಅನುದಾನ ನಿಗದಿ ಮಾಡಿದೆ; ಈ ಯೋಜನೆಗೆ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿ (ಸಿ.ಎಸ್.ಆರ್)ಯಡಿ ಪಡೆದಿರುವ ಆರ್ಥಿಕ ನೆರವು ಎಷ್ಟು? | ಈ ಯೋಜನೆಗೆ ರಾಜ್ಯ ಸರ್ಕಾರದಿಂದ ಯಾವುದೇ ಅನುದಾನ ನಿಗಧಿಯಾಗಿರುವುದಿಲ್ಲ. ಸಿ.ಎಸ್.ಆರ್ ರಡಿ SELCO FOUNDATON ಸಂಸ್ಥೆಯು 121 ಕೋಟಿ ಅನುದಾನವನ್ನು ಈ ಯೋಜನೆಗಾಗಿ ಆರ್ಥಿಕ ನೆರವು ನೀಡುತ್ತದೆ. |

ಆಕುಕ 108 ಎಸ್‌ಎಂಎಂ 2026

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)